4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

(ಗೊಂದಲ)

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳ ಮತ್ತು ಶಾಸನಾ ರಚನೆ, ಪಶುಸಂಗೋಪನಾ ಮತ್ತು ಮುಜರಾಯಿ ಸಚಿವರು)(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ): ಭಾರತ ಸಂವಿಧಾನ 151(2)ನೇ ಅನುಚ್ಛೇದದ ಮೇರೆಗೆ 31 ನೇ ಮಾರ್ಚ್ 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳು ಮತ್ತು ಸಾಮಾನ್ಯ ಮತ್ತು ಸಾಮಾಜಿಕ ವಲಯ ಮೇಲಿನ ವರದಿ (ಸಂಖ್ಯೆ–10) ಯನ್ನು ಸಭೆಯ ಮುಂದಿಡುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು. ಈಗ ವರದಿಯನ್ನೊಪ್ಪಿಸುವುದು.

(ಗೊಂದಲ)

SRI JAGADISH SHETTAR: The House is not in order.

(ಗೊಂದಲ)

5. ವರದಿಯನ್ನೊಪ್ಪಿಸುವುದು.

(ಗೊಂದಲ)

ಅಧ್ಯಕ್ಷರು: (ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ, ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಇವರ ಪರವಾಗಿ, ನಾನು 2014–15 ನೇ ಸಾಲಿನ ಸಮಿತಿಯ ಒಂದನೇ ವರದಿಯನ್ನು ಒಪ್ಪಿಸುತ್ತಿದ್ದೇನೆ.

(ಗೊಂದಲ)

SRI JAGADISH SHETTAR: The House is not order.

(ಗೊಂದಲ)

ಅಧ್ಯಕ್ಷರು: ಈಗ ವಿಧೇಯಕವನ್ನು ಮಂಡಿಸುವುದು.

(ಗೊಂದಲ)

ಶ್ರೀ ಪ್ರಮೋದ್ ಮಧ್ವರಾಜ್: ಬಡವರ ಸಮಸ್ಯೆ ಇದೆ. . .. .

(ಗೊಂದಲ)

5. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ 2015

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು)(ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, 2015ನೇ ಸಾಲಿನ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆಯನ್ನು ಮಂಡಿಸಲಾಯಿತು.

(ಗೊಂದಲ)

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ, 2015ನೇ ಸಾಲಿನ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿಯನ್ನು ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು